ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಕ್ಲಬ್/2015-16 4845

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001
ದಿನಾಂಕ: 09-03-2017
10

## -: ಸುತ್ತೋಲೆ :-

ವಿಷಯ:- 2016-17ನೇ ಸಾಲಿಗೆ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಇನೊವೇಷನ್ ಕ್ಲಬ್ ಯೋಜನೆ ಯಡಿಯಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಮಾಹಿತಿ ಒದಗಿಸುವ ಬಗ್ಗೆ.

ಉಲ್ಲೇಖ:- 2016-17ನೇ ಸಾಲಿನ ಇಲಾಖಾ ವಾರ್ಷಿಕ ಆಡಳಿತ ವರದಿ ತಯಾರಿಸಲು ಅಂಕಿ ಅಂಶಗಳ ಮಾಹಿತಿಯನ್ನು ಸಂಗ್ರಹಿಸುವ ಬಗ್ಗೆ.

-----

ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಸಂಬಂಧಿಸಿದಂತೆ ಅನೌಪಚಾರಿಕ ವಲಯ ಮತ್ತು ಇತರೆ ಸಾಮಾಜಿಕ ಕ್ಷೇತ್ರಗಳ ಸಮಸ್ಯೆಗಳ ಸಂಶೋಧನೆ ಹಾಗೂ ಶೈಕ್ಷಣಿಕ ಪ್ರಾಜೆಕ್ಟ್‌ಗಳ ವಿಷಯವಾಗಿ ಪರಿಗಣಿಸಿ ನವೀನ ಪರಿಹಾರಗಳನ್ನು ಕಂಡು ಹಿಡಿಯಲು ಉತ್ತೇಜಿಸುವ ಉದ್ದೇಶ ಇನೊವೇಷನ್ ಕ್ಲಬ್‌ನ ಯೋಜನೆಯಾಗಿರುತ್ತದೆ.

2016-17 ಸಾಲಿನ ಇಲಾಖಾ ವಾರ್ಷಿಕ ಆಡಳಿತ ವರದಿ ತಯಾರಿಸಲು ಅಂಕಿ ಅಂಶಗಳ ಮಾಹಿತಿಯನ್ನು ನೀಡಬೇಕಾಗಿರುವುದರಿಂದ. ಇಲ್ಲಿಯವರೆಗೂ ಇನೊವೇಷನ್ ಕ್ಲಬ್‌ನ್ನು ಪ್ರಾರಂಭಿಸಿರುವ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರು ತಮ್ಮ ಸಂಸ್ಥೆಗಳಲ್ಲಿ ಇನೊವೇಷನ್ ಕ್ಲಬ್‌ನ ಅಡಿಯಲ್ಲಿ 2016-17ನೇ ಸಾಲಿನಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಶೀರ್ಷಿಕೆಯೊಂದಿಗಿನ google formನ **https://goo.gl/forms/mp3dQGDTRpCcv1Mm2** ಲಿಂಕ್‌ನಲ್ಲಿ ಭರ್ತಿ ಮಾಡಿ **ಅತಿ ಜರೂರಾಗಿ** ಕಳುಹಿಕೊಡಲು ಈ ಮೂಲಕ ಸೂಚಿಸಲಾಗಿದೆ.

09/03/17
ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ,

1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ/ ಇನೊವೇಷನ್ ಕ್ಲಬ್ ಸಂಯೋಜಕರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ತುರ್ತು ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು, ಡಿಟಿಇ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.